ಓಎಸ್ ನಂ.1126|2022
ಪಿ ಡಬ್ಲ್ಯೂ-1

ದಿನಾಂಕಃ **26.10.2024** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.

<u>ವಾದಿಯ ಮುಖ್ಯ ವಿಚಾರಣೆಃ</u>

ನಾನು ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ ಹಾಗೂ ಅವುಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿದ್ದು ಅದಕ್ಕೆ ನಾನೇ ಸಹಿ ಮಾಡಿರುತ್ತೇನೆ.

ನನ್ನ ಮುಂದುವರಿದ ಮುಖ್ಯ ವಿಚಾರಣೆಯ ಸಲುವಾಗಿ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು, ನಿಶಾನೆಗಳನ್ನಾಗಿ ಗುರುತಿಸಬೇಕೆಂದು ಕೋರಿಕೊಳ್ಳುತ್ತೇನೆ.

ನನ್ನ ತಾಯಿ ಅಂದರೆ ಈ ದಾವೆಯ ವಾದಿ ನನಗೆ ಈ ಕೇಸಿನಲ್ಲಿ ಪ್ರತಿನಿಧಿಸಲು ಹಾಗೂ ಸಾಕ್ಷಿ ನುಡಿಯಲು ಬರೆದುಕೊಟ್ಟ ವಿಶೇಷ ಅಧಿಕಾರ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಆರ್ ಎಸ್ ಎ ಸಂಖ್ಯೆ 1487/2019 ರ ಆದೇಶದ ದೃಡೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಕ್ರಿಮಿನಲ್ ಪೆಟಿಷನ್ ಸಂಖ್ಯೆ 8841/2024 ರ ಅರ್ಜಿ ಹಾಗೂ ಆದೇಶಪುಟಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ3 ಮತ್ತು ನಿಪಿ-4 ಎಂದು ಗುರುತಿಸಲಾಯಿತು.

ಮುಂದುವರಿದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದು ಕಾಲಾವಕಾಶ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.,
ತುಮಕೂರು. C/c